ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**15.06.2025 / 1.10 pm**

**<><*<><>*><>**

ಮುಖ್ಯಾಂಶಗಳು

೧. ಸೈಪ್ರಸ್, ಕೆನಡಾ, ಕ್ರೋವೇಷಿಯಾ ರಾಷ್ಟ್ರಗಳ ಪ್ರವಾಸ ಆರಂಭಿಸಿದ ತೆರಳಿದ ಪ್ರಧಾನಿ ನರೇಂದ್ರ ಮೋದಿ

೨. ಉತ್ತರಾಖಂಡದ ಗೌರಿಕುಂಡ್‌ನಲ್ಲಿ ಹೆಲಿಕಾಪ್ಟರ್ ಪತನ; ಪೈಲೆಟ್ ಸೇರಿ ಏಳು ಮಂದಿ ಸಾವು

೩. ಭಾರತದ ಪವನ ಶಕ್ತಿ ಸಾಮರ್ಥ್ಯವು ೫೧.೫ ಗಿಗಾವ್ಯಾಟ್‌ಗೆ ಏರಿಕೆ; ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೪. ಇರಾನ್ ದಾಳಿ ನಡೆಸಿದರೆ ಅಮೆರಿಕದಿಂದ ತೀವ್ರ ಪ್ರತಿ ದಾಳಿ- ಡೊನಾಲ್ಡ್ ಟ್ರಂಪ್ ಎಚ್ಚರಿಕೆ

೫. ಡಬ್ಲ್ಯುಟಿಟಿ ಟೇಬಲ್ ಟೆನಿಸ್: ಪುರುಷರ ಡಬಲ್ಸ್‌ನಲ್ಲಿ ಫೈನಲ್ ಪ್ರವೇಶಿಸಿದ ಭಾರತದ ಮಾನವ್ ಠಕ್ಕರ್, ಮನುಷ್ ಶಾ ಜೋಡಿ

><><><><><><><><><

ಸೈಪ್ರಸ್, ಕೆನಡಾ ಮತ್ತು ಕ್ರೊಯೇಷಿಯಾ ರಾಷ್ಟ್ರಗಳ ತಮ್ಮ ಪ್ರವಾಸವು, ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಪಾಲುದಾರ ರಾಷ್ಟ್ರಗಳು ನೀಡಿರುವ ದೃಢ ಬೆಂಬಲಕ್ಕಾಗಿ ಧನ್ಯವಾದ ಹೇಳಲು ಮತ್ತು ಭಯೋತ್ಪಾದನೆಯನ್ನು ಎದುರಿಸುವ ಬಗ್ಗೆ ಜಾಗತಿಕ ತಿಳುವಳಿಕೆಯನ್ನು ಹೆಚ್ಚಿಸಲು ಒಂದು ಅವಕಾಶವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಸೈಪ್ರಸ್‌ಗೆ ತೆರಳುವ ಮುನ್ನ ನೀಡಿದ ಹೇಳಿಕೆಯಲ್ಲಿ, ಈ ಭೇಟಿಯು ಐತಿಹಾಸಿಕ ಬಾಂಧವ್ಯ ನಿರ್ಮಿಸಲು ಮತ್ತು ವ್ಯಾಪಾರ, ಹೂಡಿಕೆ, ಭದ್ರತೆ, ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸಂಬಂಧಗಳನ್ನು ವಿಸ್ತರಿಸಲು ಹಾಗೂ ವಿನಿಮಯವನ್ನು ಉತ್ತೇಜಿಸಲು ಅವಕಾಶವನ್ನು ಒದಗಿಸುತ್ತದೆ ಎಂದು ಹೇಳಿದ್ದಾರೆ. ಕೆನಡಾದಲ್ಲಿ ನಡೆಯುವ ಜಿ-೭ ಶೃಂಗಸಭೆಯು ಜಾಗತಿಕ ಸಮಸ್ಯೆಗಳು ಮತ್ತು ಜಾಗತಿಕ ದಕ್ಷಿಣದ ಆದ್ಯತೆಗಳ ಕುರಿತು ಅಭಿಪ್ರಾಯಗಳ ವಿನಿಮಯಕ್ಕೆ ಅವಕಾಶವನ್ನು ಒದಗಿಸುತ್ತದೆ ಎಂದು ಪ್ರಧಾನಿ ತಿಳಿಸಿದ್ದಾರೆ. ಭಾರತ ಮತ್ತು ಕ್ರೊಯೇಷಿಯಾ ಶತಮಾನಗಳಷ್ಟು ಹಳೆಯದಾದ ನಿಕಟ ಸಾಂಸ್ಕೃತಿಕ ಸಂಪರ್ಕಗಳನ್ನು ಹೊಂದಿವೆ. ಕ್ರೊಯೇಷಿಯಾಕ್ಕೆ, ತಮ್ಮ ಭೇಟಿಯು

ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರಕ್ಕಾಗಿ ಬಾಂಧವ್ಯ ವೃದ್ಧಿಸಲು ಸಹಕಾರಿಯಾಗಲಿದೆ ಎಂದು ಸ್ಪಷ್ಟ ಪಡಿಸಿದ್ದಾರೆ.ಸೈಪ್ರಸ್ ಭೇಟಿಯ ಸಮಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಸೈಪ್ರಸ್ ಅಧ್ಯಕ್ಷ ನಿಕೋಸ್ ಕ್ರಿಸ್ಟೋಡೌಲೈಡ್ಸ್ ಅವರನ್ನು ಭೇಟಿ ಮಾಡಲಿದ್ದಾರೆ. ವ್ಯಾಪಾರ ಮತ್ತು ಹೂಡಿಕೆ, ಶಿಕ್ಷಣ, ಕಡಲ ಸಹಕಾರ, ಡಿಜಿಟಲ್ ಸಂಪರ್ಕ ಮತ್ತು ಪ್ರಾದೇಶಿಕ ಭದ್ರತೆಯನ್ನು ಒಳಗೊಂಡಂತೆ ಉಭಯ ನಾಯಕರು ವ್ಯಾಪಕ ಚರ್ಚೆಗಳನ್ನು ನಡೆಸುವ ನಿರೀಕ್ಷೆಯಿದೆ. ಆಕಾಶವಾಣಿ ನ್ಯೂಸ್ ಜೊತೆ ಮಾತನಾಡಿದ ಸೈಪ್ರಸ್‌ನ ಭಾರತೀಯ ಹೈಕಮಿಷನರ್ ಮನೀಶ್, ಪ್ರಧಾನಿಯವರ ಭೇಟಿಯು ದ್ವಿಪಕ್ಷೀಯ ಸಂಬಂಧಕ್ಕೆ ಹೊಸ ಆಯಾಮ ಮತ್ತು ನವೀಕೃತ ಬಲ ನೀಡಲಿದೆ ಎಂದು ಹೇಳಿದರು. ಸೈಪ್ರಸ್ ೨೦೩೫ ರ ರಾಷ್ಟ್ರೀಯ ದೃಷ್ಟಿಕೋನವನ್ನು ಹೊಂದಿದೆ, ಆದರೆ ಭಾರತವು ೨೦೪೭ ರ 'ವಿಕಸಿತ ಭಾರತ' ಎಂಬ ದೃಷ್ಟಿಕೋನವನ್ನು ಹೊಂದಿದೆ ಎಂದು ಅವರು ಹೇಳಿದರು.

><><><><><><><><><

ಉತ್ತರಾಖಂಡದ ರುದ್ರಪ್ರಯಾಗ್ ನ ಗೌರಿಕುಂಡ್ ನಲ್ಲಿ ಇಂದು ಬೆಳಗಿನ ಜಾವ ಸಂಭವಿಸಿದ ಹೆಲಿಕಾಪ್ಟರ್ ಪತನದಲ್ಲಿ ಏಳು ಮಂದಿ ಮೃತಪಟ್ಟಿದ್ದಾರೆ. ಕೇದಾರನಾಥ ಧಾಮಕ್ಕೆ ಭೇಟಿ ನೀಡಿ ಗುಪ್ತಕಾಶಿಗೆ ಹಿಂದಿರುಗುತ್ತಿದ್ದ ಹೆಲಿಕಾಪ್ಟರ್ ತಾಂತ್ರಿಕ ದೋಷದಿಂದ ನಿಯಂತ್ರಣ ಕಳೆದುಕೊಂಡು, ಪೈಲಟ್ ಕ್ರ್ಯಾಶ್-ಲ್ಯಾಂಡಿಂಗ್‌ಗೆ ಪ್ರಯತ್ನಿಸಿದಾಗ ಈ ಘಟನೆ ಸಂಭವಿಸಿದೆ. ಈ ಘಟನೆ ಬೆಳಿಗ್ಗೆ ೫:೩೦ ರ ಸುಮಾರಿಗೆ ಸಂಭವಿಸಿದ್ದು, ಪೈಲಟ್ ಸೇರಿದಂತೆ ಏಳು ಜನರು ಅಪಘಾತದ ಸಮಯದಲ್ಲಿ ಹೆಲಿಕಾಪ್ಟರ್‌ನಲ್ಲಿದ್ದರು. ವರದಿಗಳ ಪ್ರಕಾರ, ಅಪಘಾತದಲ್ಲಿ ಏಳು ಮಂದಿ ಸಾವನ್ನಪ್ಪಿದ್ದಾರೆ. ಘಟನೆ ವರದಿಯಾದ ತಕ್ಷಣ, ರಕ್ಷಣಾ ತಂಡಗಳನ್ನು ಸ್ಥಳಕ್ಕೆ ರವಾನಿಸಲಾಗಿದೆ. ಮತ್ತು ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ಪ್ರಾರಂಭಿಸಲಾಗಿದೆ. ಅಪಘಾತಕ್ಕೀಡಾದ ಹೆಲಿಕಾಪ್ಟರ್ ಸಂಪೂರ್ಣವಾಗಿ ಸುಟ್ಟುಹೋಗಿದೆ ಮತ್ತು ಎಲ್ಲಾ ಶವಗಳನ್ನು ಹೊರತೆಗೆಯಲಾಗಿದೆ ಎಂದು ಎಸ್‌ಡಿಆರ್‌ಎಫ್ ಪಡೆ ತಿಳಿಸಿದೆ. ಈ ದುರಂತದ ಬಗ್ಗೆ ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ.

><><><><><><><><><

ಭಾರತದ ಪವನ ಶಕ್ತಿ ಸಾಮರ್ಥ್ಯವು ಕಳೆದ ವರ್ಷ ೪೬.೪೨ ಗಿಗಾವ್ಯಾಟ್ ನಿಂದ ಶೇಕಡ ೧೦.೫ ಕ್ಕಿಂತ ಹೆಚ್ಚು ಏರಿಕೆಯಾಗಿ ೫೧.೫ ಗಿಗಾವ್ಯಾಟ್ ಗೆ ತಲುಪಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಈ

ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಸಚಿವರು ೫೧.೫ ಗಿಗಾವ್ಯಾಟ್ ಸಾಮರ್ಥ್ಯ ಮತ್ತು ಏರಿಕೆಯೊಂದಿಗೆ, ನಾವೀನ್ಯತೆ, ಹಸಿರು ತಂತ್ರಜ್ಞಾನ ಮತ್ತು ಸುಸ್ಥಿರ ಪ್ರಗತಿಯಿಂದ ನಡೆಸಲ್ಪಡುವ ಆತ್ಮನಿರ್ಭರ ಭಾರತದತ್ತ ಸಾಗುತ್ತಿದ್ದೇವೆ" ಎಂದು ತಿಳಿಸಿದ್ದಾರೆ. 'ಈ ಜಾಗತಿಕ ಪವನ ದಿನದಂದು, ಭಾರತದ ಶುದ್ಧ ಇಂಧನ ಬೆಳವಣಿಗೆಗೆ ಚಾಲನೆ ನೀಡುವ ಪವನದ ಶಕ್ತಿಯನ್ನು ಆಚರಿಸೋಣ" ಎಂದು ಕರೆ ನೀಡಿದ್ದಾರೆ. ಭಾರತದ ಸೌರಶಕ್ತಿ ಸಾಮರ್ಥ್ಯವು ಕಳೆದ ೧೧ ವರ್ಷಗಳಲ್ಲಿ ಭಾರಿ ಜಿಗಿತವನ್ನು ಕಂಡಿದೆ, ೨೦೧೪ ರಲ್ಲಿ ಕೇವಲ ೨.೮೨ ಗಿಗಾವ್ಯಾಟ್ ಆಗಿತ್ತು. ಭಾರತದ ನವೀಕರಿಸಬಹುದಾದ ಇಂಧನ ಒತ್ತಡದ ಹೊಸ ಪ್ರೇರಕ ಶಕ್ತಿಯಾಗಿ ಹೊರಹೊಮ್ಮಿದೆ ಎಂದು ಹೇಳಿದ್ದಾರೆ.

><><><><><><><><

ಅಹಮದಾಬಾದ್ ವಿಮಾನ ಅಪಘಾತದಲ್ಲಿ ಮೃತಪಟ್ಟವರ ಪೈಕಿ ೩೧ ಜನರ ಡಿಎನ್‌ಎ ಮಾದರಿಗಳನ್ನು ಹೋಲಿಕೆ ಮಾಡಲಾಗಿದೆ. ಇಲ್ಲಿಯವರೆಗೆ ಒಟ್ಟು ೧೨ ಶವಗಳನ್ನು ಮೃತರ ಕುಟುಂಬಗಳಿಗೆ ಹಸ್ತಾಂತರಿಸಲಾಗಿದೆ ಎಂದು ಅಹಮದಾಬಾದ್ ಸಿವಿಲ್ ಆಸ್ಪತ್ರೆಯ ಹೆಚ್ಚುವರಿ ಸೂಪರಿಂಟೆಂಡೆಂಟ್ ಡಾ. ರಜನೀಶ್ ಪಟೇಲ್ ಹೇಳಿದ್ದಾರೆ. ಪ್ರತಿಯೊಬ್ಬ ಮೃತರ ಕುಟುಂಬಕ್ಕೆ ವಿಶೇಷ ತಂಡವನ್ನು ನಿಯೋಜಿಸಲಾಗಿದೆ. ತಂಡದಲ್ಲಿ ಹಿರಿಯ ಅಧಿಕಾರಿ, ಪೊಲೀಸ್ ಮತ್ತು ವೃತ್ತಿಪರ ಸಲಹೆಗಾರರು ಇದ್ದಾರೆ. ದಿವಂಗತ ಮಾಜಿ ಮುಖ್ಯಮಂತ್ರಿ ವಿಜಯ್ ರೂಪಾನಿ ಅವರ ಶವವನ್ನು ಗುರುತಿಸುವ ಪ್ರಕ್ರಿಯೆ ಇನ್ನೂ ಮುಂದುವರೆದಿದೆ, ಇನ್ನೂ ಅವರ ಡಿಎನ್‌ಎ ಹೊಂದಾಣಿಕೆಯಾಗಿಲ್ಲ ಎಂದು ಡಾ.ರಜನೀಶ್ ಪಟೇಲ್ ತಿಳಿಸಿದ್ದಾರೆ.

><><><><><><><><

ಲಕ್ನೋದಲ್ಲಿಂದು ನಡೆಯುವ ಸಮಾರಂಭದಲ್ಲಿ ಉತ್ತರ ಪ್ರದೇಶ ಪೊಲೀಸ್ ಇಲಾಖೆಯಲ್ಲಿ ಹೊಸದಾಗಿ ನೇಮಕಗೊಂಡ ೬೦ ಸಾವಿರದ ೨೪೪ ಕಾನ್‌ಸ್ಟೆಬಲ್‌ಗಳಿಗೆ ನೇಮಕಾತಿ ಪತ್ರಗಳನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿತರಿಸಲಿದ್ದಾರೆ. ರಾಜ್ಯದ ಕಾನೂನು ಜಾರಿ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಮಹತ್ವದ ಹೆಜ್ಜೆಯನ್ನು ಗುರುತಿಸುವ ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಉಪಸ್ಥಿತರಿರಲಿದ್ದಾರೆ.

><><><><><><><><

ಪ್ರತಿ ವರ್ಷ ಜೂನ್ ೨೧ ರಂದು ನಡೆಯುವ ಅಂತಾರಾಷ್ಟ್ರೀಯ ಯೋಗ ದಿನದ ಪೂರ್ವಭಾವಿಯಾಗಿ ಬೆಂಗಳೂರಿನಲ್ಲಿಂದು ಯೋಗ ದಿನವನ್ನು ಬ್ರಹ್ಮಕುಮಾರಿಸ್ ಸಂಸ್ಥೆಯ ಸಹಯೋಗದೊಂದಿಗೆ ಕರ್ನಾಟಕದ ಕೇಂದ್ರ ಸಂವಹನ ವಿಭಾಗ ಆಯೋಜಿಸಿತ್ತು.

ಬ್ರಹ್ಮಕುಮಾರಿ ಬಿ.ಕೆ.ಅಂಬಿಕಾ, ಕೇಂದ್ರ ಸಂವಹನ ವಿಭಾಗ-ಸಿಬಿಸಿ ಕರ್ನಾಟಕ ನಿರ್ದೇಶಕಿ ಪಲ್ಲವಿ ಚಿನ್ಯಾ ಮತ್ತು ಇತರೆ ಗಣ್ಯರು ಉಪಸ್ಥಿತರಿದ್ದರು. ಯೋಗ ಮತ್ತು ಧ್ಯಾನದ ಸಕಾರಾತ್ಮಕ ಪ್ರಯೋಜನಗಳು ಮತ್ತು ಅಂತಾರಾಷ್ಟ್ರೀಯ ಯೋಗ ದಿನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಈ ಪೂರ್ವಭಾವಿ ಕಾರ್ಯಕ್ರಮವನ್ನು ನಡೆಸಲಾಯಿತು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ಬ್ರಹ್ಮಕುಮಾರಿ ರಾಜಯೋಗಿನಿ ಬಿ.ಕೆ. ಅಂಬಿಕಾ, ಒತ್ತಡ ಮತ್ತು ಆತಂಕದಲ್ಲಿ ಮುಳುಗಿರುವ ಈ ಆಧುನಿಕ ಜೀವನ ಶೈಲಿಯಲ್ಲಿ ಯೋಗ ಮತ್ತು ಧ್ಯಾನದ ಅಗತ್ಯವನ್ನು ಒತ್ತಿ ಹೇಳಿದರು.

><><><><><><><><

ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಅವರನ್ನು ವಾಷಿಂಗ್ಟನ್‌ನಲ್ಲಿ ನಡೆಯಲಿರುವ ಮಿಲಿಟರಿ ಪರೇಡ್‌ಗೆ ಆಹ್ವಾನಿಸಲಾಗಿದೆ ಎಂಬ ವರದಿಗಳನ್ನು ಅಮೆರಿಕ ದೃಢವಾಗಿ ನಿರಾಕರಿಸಿದ್ದು, ಈ ಹೇಳಿಕೆಗಳು ಸುಳ್ಳು ಎಂದು ಸ್ಪಷ್ಟ ಪಡಿಸಿದೆ.  ಯಾವುದೇ ವಿದೇಶಿ ಸೇನಾ ನಾಯಕರನ್ನು ಆಹ್ವಾನಿಸಲಾಗಿಲ್ಲ ಎಂದು ಶ್ವೇತಭವನದ ಅಧಿಕಾರಿಯೊಬ್ಬರು ಹೇಳಿಕೆಯಲ್ಲಿ ಸ್ಪಷ್ಟಪಡಿಸಿದ್ದಾರೆ. ಅಮೆರಿಕ-ಭಾರತ ಸಂಬಂಧಗಳನ್ನು ಹಾಳು ಮಾಡುವ ಗುರಿಯನ್ನು ಹೊಂದಿರುವ ತಪ್ಪು ಮಾಹಿತಿಯನ್ನು ಅವರು ತಳ್ಳಿಹಾಕಿದ್ದಾರೆ.

><><><><><><><><

ಇರಾನ್ ಮತ್ತು ಇಸ್ರೇಲ್ ನಡುವಿನ ಬಿಕ್ಕಟ್ಟು ಸತತ ಮೂರನೇ ದಿನವಾದ ಗಡಿಯಾಚೆಗಿನ ದಾಳಿಯಾಗಿ ಉಲ್ಬಣಗೊಂಡಿರುವುದರಿಂದ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇಂದು ಟೆಹ್ರಾನ್‌ಗೆ ಕಠಿಣ ಎಚ್ಚರಿಕೆ ನೀಡಿದ್ದಾರೆ. ಇತ್ತೀಚಿನ ದಾಳಿಗಳಲ್ಲಿ ಅಮೆರಿಕ ಯಾವುದೇ ಪಾತ್ರ ವಹಿಸಿಲ್ಲ ಎಂದು ಸ್ಪಷ್ಟಪಡಿಸಿರುವ ಅವರು, ಅಮೆರಿಕದ ಹಿತಾಸಕ್ತಿಗಳ ವಿರುದ್ಧ ಯಾವುದೇ ಪ್ರಚೋದನೆಯನ್ನು ಅಗಾಧ ಬಲದಿಂದ ಎದುರಿಸಲಾಗುವುದು ಎಂದು ಎಚ್ಚರಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ ಅವರು, "ಇರಾನ್ ಮೇಲೆ ನಡೆದ ದಾಳಿಯಲ್ಲಿ ಅಮೆರಿಕದ ಯಾವುದೇ ಪಾತ್ರವಿಲ್ಲ. ಇರಾನ್ ಅಮೆರಿಕ ನಮ್ಮ ಮೇಲೆ ದಾಳಿ ಮಾಡಿದರೆ, ಅಮೆರಿಕದ ಸಶಸ್ತ್ರ ಪಡೆಗಳ ಸಂಪೂರ್ಣ ಶಕ್ತಿ, ಹಿಂದೆಂದೂ ನೋಡಿರದ ಮಟ್ಟದಲ್ಲಿ ನಿಮ್ಮ ಮೇಲೆ ದಾಳಿ ಮಾಡಲಿದೆ ಎಂದು ಹೇಳಿದ್ದಾರೆ. ನಾವು ಇರಾನ್ ಮತ್ತು ಇಸ್ರೇಲ್ ನಡುವೆ ಸುಲಭವಾಗಿ ಒಪ್ಪಂದ ಮಾಡಿಕೊಳ್ಳಬಹುದು ಮತ್ತು ಈ ಸಂಘರ್ಷವನ್ನು ಕೊನೆಗೊಳಿಸಬಹುದು ಎಂದು ತಿಳಿಸಿದ್ದಾರೆ.

><><><><><><><><

ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆ ಮತ್ತು ರಷ್ಯಾ-ಉಕ್ರೇನ್ ನಡುವೆ ಶಾಂತಿ ಪ್ರಯತ್ನಗಳ ಕುರಿತು ಚರ್ಚಿಸಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ದೂರವಾಣಿ ಮೂಲಕ ಸಂಭಾಷಣೆ ನಡೆಸಿದ್ದ ಇಸ್ರೇಲ್-ಇರಾನ್ ಸಂಘರ್ಷವನ್ನು ಕೊನೆಗೊಳಿಸುವ ಅಗತ್ಯತೆಯ ಬಗ್ಗೆ ಉಭಯ ನಾಯಕರು ಚರ್ಚಿಸಿದ್ದಾರೆ.

><><><><><><><><

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ನಾಳೆ ಮತ್ತು ನಾಡಿದ್ದು ಪುದುಚೇರಿಗೆ ಎರಡು ದಿನಗಳ ಅಧಿಕೃತ ಭೇಟಿ ನೀಡಲಿದ್ದಾರೆ. ಜವಾಹರಲಾಲ್ ಇನ್ಸ್ಟಿಟ್ಯೂಟ್ ಆಫ್ ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಹಾಗೂ ಪಾಂಡಿಚೇರಿ ವಿಶ್ವವಿದ್ಯಾಲಯದಲ್ಲಿ ನಡೆಯುವ ಪ್ರಮುಖ ಕಾರ್ಯಕ್ರಮಗಳಲ್ಲಿ ಅವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಭಾಗವಾಗಿ ವಿದ್ಯಾರ್ಥಿಗಳು, ಅಧ್ಯಾಪಕರು ಮತ್ತು ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ. ಇದು ರಾಷ್ಟ್ರೀಯ ಪ್ರಾಮುಖ್ಯತೆಯ ವಿಷಯಗಳಲ್ಲಿ ಶೈಕ್ಷಣಿಕ ಸಮುದಾಯದೊಂದಿಗೆ ಸಂಪರ್ಕ ಸಾಧಿಸುವ ಅವರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. 'ಏಕ್ ಪೆಡ್ ಮಾ ಕೆ ನಾಮ್' ಅಭಿಯಾನದಡಿ ಉಪರಾಷ್ಟ್ರಪತಿಯವರು ಸಸಿ ನೆಡಲಿದ್ದಾರೆ.

><><><><><><><><

ಉತ್ತರ ಮ್ಯಾಸಿಡೋನಿಯಾದಲ್ಲಿ ನಡೆದ ಡಬ್ಲ್ಯುಟಿಟಿ ಟೇಬಲ್ ಟೆನಿಸ್ ಸ್ಕೋಪ್ಜೆ-೨೦೨೫ ಸ್ಪರ್ಧೆಯಲ್ಲಿ ಪುರುಷರ ಡಬಲ್ಸ್ ಫೈನಲ್‌ಗೆ ಭಾರತದ ಮಾನವ್ ಥಕ್ಕರ್ ಮತ್ತು ಮನುಷ್ ಶಾ ಪ್ರವೇಶಿಸಿದ್ದಾರೆ. ಸೆಮಿಫೈನಲ್‌ನಲ್ಲಿಂದು ಅವರು ದಕ್ಷಿಣ ಕೊರಿಯಾದ ಜೋಡಿ ಲಿಮ್ ಜೊಂಗ್‌ಹೂನ್ ಮತ್ತು ಓಹ್ ಜುನ್‌ಸಂಗ್ ಅವರನ್ನು ೩-೧ ಅಂತರದಿಂದ ಸೋಲಿಸಿದರು. ಇದಕ್ಕೂ ಮೊದಲು, ಕ್ವಾರ್ಟರ್ ಫೈನಲ್ ಸುತ್ತಿನಲ್ಲಿ ಭಾರತೀಯ ಜೋಡಿ ಸ್ಲೋವೇನಿಯಾದ ಡಾರ್ಕೊ ಜೋರ್ಗಿಕ್ ಮತ್ತು ಡೆನಿ ಕೊಜುಲ್ ಅವರನ್ನು ಪರಾಭವಗೊಳಿಸಿತು.

><><><><><><><><